ವಿಷಯ :- ಉಡುಪಿ ಕ್ರೀಡಾಂಗಣ ನಿರ್ಮಾಣ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 93(563)

ಶ್ರೀ ಯು.ಆರ್.ಸಭಾಪತಿ (ಉಡುಪಿ) :- ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

1. ಉಡುಪಿಯಲ್ಲಿ ಕ್ರೀಡಾಂಗಣ ನಿರ್ಮಿಸುವ ಪ್ರಸ್ತಾವನೆಯ ಸರ್ಕಾರದ ಮುಂದಿದೆಯೇ?

2. ಹಾಗಿದ್ದಿಲ್ಲಿ ಈ ಪ್ರಸ್ತಾವನೆಯು ಯಾವ ಹಂತದಲ್ಲಿದೆ ಹಾಗೂ ಎಂದು ಕಾರ್ಯಗತವಾಗುವುದು?

ಶ್ರೀ ಅಜಯಕುಮಾರ್ ಸರ್‌ನಾಯಕ್ (ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು) :-

1. ಹೌದು.

2. ತಪಾಸಣೆಯ ಹಂತದಲ್ಲಿದೆ.

ವಿಷಯ :- ಸರ್ಕಾರಿ ಕಿರಿಯ ಕಾಲೇಜುಗಳು.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ :- 94(589)

ಶ್ರೀ ಕೆ.ಎನ್.ನಾಗೇಗೌಡ (ಕಿರುಗಾವಲ್) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :-

ಅ. ರಾಜ್ಯದಲ್ಲಿ ಸರ್ಕಾರಿ ಜೂನಿಯರ್ ಕಾಲೇಜುಗಳನ್ನು ಸ್ಥಾಪಿಸಲಾಲಗುವುದೇ. ಮಹಿಳಾ ಎಷ್ಟು, ಬಾಲಕರು ಎಷ್ಟು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):- ರಾಜ್ಯದಲ್ಲಿ 1995-96ನೇ ಸಾಲಿನಲ್ಲಿ ಸರ್ಕಾರಿ ಕಿರಿಯ ಕಾಲೇಜುಗಳನ್ನು ಸ್ಥಾಪಿಸುವ ಅಗತ್ಯತೆಯನ್ನು ಪರಿಶೀಲಿಸಿ ಅಗತ್ಯವಿರುವೆಡೆಯಲ್ಲಿ ಕಿರಿಯ ಕಾಲೇಜುಗಳನ್ನು ಮಂಜೂರು ಮಾಡುವ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗುವುದು.